# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 142
2) ಸದಸ್ಯರ ಹೆಸರು : ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು)
3) ಉತ್ತರಿಸಬೇಕಾದ ದಿನಾಂಕ : 05-03-2025
4) ಉತ್ತರಿಸಬೇಕಾದ ಸಚಿವರು : ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಬೆಸ್ತ ಮೀನುಗಾರರ ಸಮುದಾಯದ ಸಹಕಾರ ಸಂಘಗಳಿಗೆ ಶೇ.90 ರಷ್ಟು ನೇರ ಗುತ್ತಿಗೆ ನೀಡಲು ಆದೇಶವಾಗಿದ್ದರೂ ಇದುವರೆವಿಗೂ ಜಾರಿಗೆ ಬಾರದಿರಲು ಕಾರಣವೇನು; | ಶೇ.90 ರಷ್ಟು ಬೆಸ್ತ ಸಮುದಾಯದವರು ಸದಸ್ಯರಿರುವ ಮೀನುಗಾರರ ಸಹಕಾರ ಸಂಘಗಳಿಗೆ ನೇರ ಗುತ್ತಿಗೆಯಲ್ಲಿ ಮೊದಲ ಆದ್ಯತೆ ಮೇರೆಗೆ ಜಲಸಂಪನ್ಮೂಲಗಳ ಮೀನು ಪಾಶುವಾರು ಹಕ್ಕನ್ನು ನೀಡಲು ತಿದ್ದುಪಡಿ ಆದೇಶ ಹೊರಡಿಸಲಾಗಿದೆ. ಸದರಿ ಆದೇಶಕ್ಕೆ ಕೆಲವು ಮೀನುಗಾರರ ಸಹಕಾರ ಸಂಘಗಳು ಮಾನ್ಯ ಉಚ್ಚ ನ್ಯಾಯಾಲಯ, ಬೆಂಗಳೂರು ಇಲ್ಲಿ ಪ್ರಕರಣಗಳನ್ನು ದಾಖಲಿಸಿದ್ದು, ಸದರಿ ತಿದ್ದುಪಡಿ ಆದೇಶಕ್ಕೆ ಮಾನ್ಯ ಉಚ್ಚ ನ್ಯಾಯಾಲಯವು ತಡೆಯಾಜ್ಞೆ ನೀಡಿರುವ ಕಾರಣದಿಂದ ಸದರಿ ಆದೇಶವನ್ನು ಅನುಷ್ಠಾನಗೊಳಿಸಲು ಸಾಧ್ಯವಾಗಿರುವುದಿಲ್ಲ. |
| ಆ) | ಹಲವು ವರ್ಷಗಳಿಂದ ಇದು ನ್ಯಾಯಾಲಯದಲ್ಲಿ ವಿಚಾರಣೆಗೆ ಬಾಕಿ ಇದ್ದರೂ ಇಲಾಖೆಯ ಉನ್ನತ ಮಟ್ಟದ ಅಧಿಕಾರಿಗಳು ಮೀನುಗಾರರ ಜೊತೆ ಸಭೆ ಕರೆದು ರಿಟ್ ಸಲ್ಲಿಸಿ ಇದನ್ನು ಬಗೆಹರಿಸುವ ಕಾರ್ಯ ಮಾಡಲು ವಿಳಂಬ ನೀತಿ ಅನುಸರಿಸುತ್ತಿರಲು ಕಾರಣವೇನು; | ಸದರಿ ಪ್ರಕರಣವು ನ್ಯಾಯಾಲಯದಲ್ಲಿರುವುದರಿಂದ ಸಭೆ ಕರೆದು ಚರ್ಚಿಸಲು ಸಾಧ್ಯವಾಗಿರುವುದಿಲ್ಲ.<br><br>ಅಲ್ಲದೆ, ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಈ ಸಂಬಂಧ ದಾಖಲಾಗಿರುವ ಪ್ರಕರಣಗಳನ್ನು ಶೀಘ್ರ ಇತ್ಯರ್ಥಗೊಳಿಸುವಂತೆ ಕೋರಿ ಮಾನ್ಯ ನ್ಯಾಯಾಲಯದಲ್ಲಿ "**Early Hearing Memo**" ಸಲ್ಲಿಸಲಾಗಿರುತ್ತದೆ. |
| ಇ) | ಯಾವ ಕಾಲಮಿತಿಯಲ್ಲಿ ನ್ಯಾಯಾಲಯಕ್ಕೆ ರಿಟ್ ಅರ್ಜಿ ಸಲ್ಲಿಸಿ ಈ ಸಮಸ್ಯೆಯನ್ನು ಬಗೆಹರಿಸಲು ಕ್ರಮವಹಿಸಲಾಗುವುದು? | ಮೇಲೆ ತಿಳಿಸಿರುವಂತೆ ಮಾನ್ಯ ನ್ಯಾಯಾಲಯದಲ್ಲಿ ದಾಖಲಾಗಿರುವ ಪ್ರಕರಣಗಳನ್ನು ಶೀಘ್ರ ಇತ್ಯರ್ಥಗೊಳಿಸಲು "**Early Hearing Memo**" ಹಾಕಲಾಗಿದೆ.<br><br>ಪ್ರಕರಣಗಳನ್ನು ಇತ್ಯರ್ಥಗೊಳಿಸಲು ಅಗತ್ಯ ಕ್ರಮಗಳನ್ನು ವಹಿಸಲಾಗುವುದು |

ಸಂಖ್ಯೆ: ಪಸಂಮೀ ಇ-21 ಮೀಇಯೋ 2025

(ಮಂಕಾಳ ಎಸ್. ವೈದ್ಯ)
ಮೀನುಗಾರಿಕೆ, ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು